**1ನೇ ಹೆಚ್ಚುವರಿ ಸಿವಿಲ್ ದಂಡಾಧಿಕಾರಿಯವರ ನ್ಯಾಯಾಲಯ ಚನ್ನಗಿರಿ**

**ಕ್ರಿಮಿನಲ್ ಮೊಕದ್ದಮೆ ಸಂಖ್ಯೆ: 1145/2025**

**ಪಿರ್ಯಾದುದಾರರು :** **ವಿರುದ್ಧ** **ಆರೋಪಿತರು:**

ಚನ್ನಗಿರಿ ಪೊಲೀಸ್ ಠಾಣೆ

ಎ1. ರಾಘವೇಂದ್ರ ಕೆ ವಿ ಬಿನ್ ಕೆ ಬಿ ವಿಠೊಬರಾವ್
ವಯಸ್ಸುಃ 44 ವರ್ಷ
ವಾಸಃ ಮಾಸೂರು ಸರ್ಕಲ್, ಶಿಕಾರಿಪುರ,
ಶಿವಮೊಗ್ಗ ಜಿಲ್ಲೆ

**<u>ದೋಷಾರೋಪಣೆ</u>**

**ಶ್ರೀಮತಿ ಮಹಾಲಕ್ಷ್ಮೀ ಜಿ 1**ನೇ ಹೆಚ್ಚುವರಿ ಸಿವಿಲ್.ನ್ಯಾ.ದಂಡಾಧಿಕಾರಿ, ಚನ್ನಗಿರಿ ಈ ಮೂಲಕ ನಿಮ್ಮ ಮೇಲೆ ಅಪಾಧಿಸುವುದೇನೆಂದರೆ ಆರೋಪಿತರಾದ ನೀವು:-

ಮೊದಲನೆಯದಾಗಿ ದಿಃ 26-09-2023 ರಂದು ಚನ್ನಗಿರಿ ಪೊಲೀಸ್ ಠಾಣಾ ವ್ಯಾಪ್ತಿಯ ವ್ಯಾಪ್ತಿಯ ಚನ್ನಗಿರಿ-ದಾವಣಗೆರೆ ರಾಜ್ಯ ಹೆದ್ದಾರಿ ರಸ್ತೆಯ ನಲ್ಲೂರಎ ಗ್ರಾಮದ ಬಳಿ ಇರುವ ಸೋಮಶೆಟ್ಟಿಹಳ್ಳಿ ಕ್ರಾಸ್ ಬಳಿ ಆರೋಪಿಯಾದ ನೀನು ಮೃತ ಕಾರ್ತಿಕನ ಮಾಲೀಕತ್ವದ ಬೈಕ್ ನಲ್ಲಿ ಕಾರ್ತಿಕನನ್ನು ಹಿಂಬದಿ ಸವಾರನಾಗಿ ಕೂರಿಸಿಕೊಂಡು ಅತೀ ವೇಗ ಮತ್ತು ಅಜಾಗರೂಕತೆಯಿಂದ ಚಾಲನೆ ಮಾಡಿಕೊಂಡು ಬರುವಾಗ ಏಕಾ ಏಕಿ ನಾಯಿ ಅಡ್ಡಬಂದಿದ್ದರಿಂದ ಬೈಕ್ ನಿನ್ನ ನಿಯಂತ್ರಣ ತಪ್ಪಿ ಸ್ಕಿಡ್ ಆಗಿ ಬಿದ್ದಿರುತ್ತದೆ. ಆ ಮೂಲಕ ಭಾ.ದಂ.ಸಂ.ಕಲಂ 279 ಕಾಯ್ದೆ ಅಡಿಯಲ್ಲಿ ಈ ನ್ಯಾಯಾಲಯದ ಸಂಜ್ಞಾನದೊಳಗೆ ಶಿಕ್ಷಾರ್ಹವಾದ ಅಪರಾಧವನ್ನು ಎಸಗಿರುತ್ತೀರಿ.

ಎರಡನೆಯದಾಗಿ ಮೇಲೆ ಹೇಳಿದ ಸ್ಥಳ, ಸಮಯ ಮತ್ತು ದಿನಾಂಕದಂದು ಅರೋಪಿಯಾದ ನೀನು ಬೈಕ್ ನ್ನು ಅತೀ ವೇಗ ಮತ್ತು ಅಜಾಗರೂಕತೆಯಿಂದ ಚಾಲನೆ ಮಾಡಿಕೊಂಡು ಬಂದು ಏಕಾ ಏಕಿ ನಾಯಿ ಅಡ್ಡಬಂದಿದ್ದರಿಂದ ಬೈಕ್ ನಿನ್ನ ನಿಯಂತ್ರಣ ತಪ್ಪಿ ಸ್ಕಿಡ್ ಆಗಿ ಬಿದ್ದಿದ್ದರಿಂದ ಹಿಂಬದಿ ಸವಾರನಾಗಿ ಕುಳಿತಿದ್ದ ಕಾರ್ತಿಕ ನೆಲಕ್ಕೆ ಬಿದ್ದ ಕಾರಣ ಆತನ ತಲೆಗೆ ಬಲವಾದ ಪೆಟ್ಟು ಬಿದ್ದು ಸ್ಥಳದಲ್ಲಿಯೇ ಮೃತಪಟ್ಟಿರುತ್ತಾರೆ. ಆ ಮೂಲಕ ಭಾ.ದಂ.ಸಂ.ಕಲಂ 304(ಎ) ಅಡಿಯಲ್ಲಿ ಈ ನ್ಯಾಯಾಲಯದ ಸಂಜ್ಞಾನದೊಳಗೆ ಶಿಕ್ಷಾರ್ಹ ಅಪರಾಧವನ್ನು ಎಸಗಿರುತ್ತೀರಿ.

(ಮೇಲೆ ಹೇಳಿದ ಆರೋಪಗಳ ಮೇಲೆ ಈ ನ್ಯಾಯಾಲಯದಲ್ಲಿ ವಿಚಾರಣೆಗೆ ಗುರಿಯಾಗಿರುತ್ತೀರಾ ಎಂದು ನಿರ್ದೇಶಿಸಿದ್ದೇನೆ)

ದಿನಾಂಕ: 10-03-2026

**(ಶ್ರೀಮತಿ ಮಹಾಲಕ್ಷ್ಮೀ ಜಿ )**
**1ನೇ ಹೆಚ್ಚುವರಿ ಪ್ರ.ದ.ನ್ಯಾ , ದಂಡಾಧಿಕಾರಿ,**
**ಚನ್ನಗಿರಿ.**

**1ನೇ ಹೆಚ್ಚುವರಿ   ಸಿವಿಲ್ ನ್ಯಾಯಾಧೀಶರು ಮತ್ತು ಜೆಎಂಎಫ್ ಸಿ ಚನ್ನಗಿರಿ,**

**ನ್ಯಾಯಾಲಯದಲ್ಲಿ**

**ಸಿಸಿ ನಂ:1145/2025**

1. **ಕರ್ನಾಟಕ ಸರ್ಕಾರ (ಚನ್ನಗಿರಿ   ಪಿ.ಎಸ್ )**

**ವಿರುದ್ಧ**

ಎ1. ರಾಘವೇಂದ್ರ ಕೆ ವಿ ಬಿನ್ ಕೆ ಬಿ ವಿಠೊಬರಾವ್
ವಯಸ್ಸುಃ 44 ವರ್ಷ
ವಾಸಃ ಮಾಸೂರು ಸರ್ಕಲ್, ಶಿಕಾರಿಪುರ, ಶಿವಮೊಗ್ಗ ಜಿಲ್ಲೆ

## ಆರೋಪಿಯ ಹೇಳಿಕೆ

1. ಈಗ ಓದಿ ಹೇಳಿದ ನಿನ್ನ ಮೇಲಿನ ಆಪಾದೆನೆಯನ್ನು ಕೇಳಿದ್ದಿಯಾ? ತಿಳಿಯಿತೇ?

ಉತ್ತರಃ

2. ಸದರಿ ಆಪಾದನೆಯನ್ನು ಒಪ್ಪಿಕೊಳ್ಳುವಿರೋ? ಅಥವಾ ವಿಚಾರಣೆಯಾಗಬೇಕೋ?

ಉತ್ತರಃ

(ಆರೋಪಿತಳಿಗೆ ಆರೋಪಣೆಯ ಸಾರಾಂಶವನ್ನು ದಿನಾಂಕಃ 10-03-2026 ರಂದು ತೆರೆದ ನ್ಯಾಯಾಲಯದಲ್ಲಿ ಓದಿ ಕೇಳಿ ಅವನುಃಳು ಕೊಟ್ಟ ಉತ್ತರವನ್ನು ಬರೆದುಕೊಳ್ಳಲಾಯಿತು.)

ದಿನಾಂಕ:10-03-2026

**(ಶ್ರೀಮತಿ ಮಹಾಲಕ್ಷ್ಮೀ ಜಿ )**
**1ನೇ ಹೆಚ್ಚುವರಿ ಪ್ರ.ದ.ನ್ಯಾ ,**
**ದಂಡಾಧಿಕಾರಿ, ಚನ್ನಗಿರಿ.**